# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | 444 |
| ಸದಸ್ಯರ ಹೆಸರು | ಶ್ರೀ ಪ್ರಕಾಶ್ ಕೆ. ರಾಥೋಡ್<br>(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | 19-07-2024 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ ಜಿಲ್ಲಾ ವ್ಯಾಪ್ತಿಯಲ್ಲಿ ರೈತರು ರಾಸಾಯನಿಕ ಗೊಬ್ಬರ ಬಳಸಿ ವ್ಯವಸಾಯ ಮಾಡುತ್ತಿರುವುದರಿಂದ ಭೂಮಿಯು ತನ್ನ ಫಲವತ್ತತೆಯನ್ನು ಕಳೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಆ) | ಭೂಮಿಯು ಸವಳು ಬರಡು ಭೂಮಿಯಾಗುತ್ತಿರುವುದನ್ನು ತಪ್ಪಿಸಲು ರೈತರಿಗೆ ಬದಲಿ ವ್ಯವಸಾಯ ನೀತಿಯನ್ನು ರೂಪಿಸಲು ಸರ್ಕಾರವು ಏನಾದರೂ ಕಾರ್ಯಕ್ರಮ ಹಮ್ಮಿಕೊಂಡಿದೆಯೇ ; | ಸವಳು ಮತ್ತು ಬರಡು ಭೂಮಿಯಾಗುತ್ತಿರುವುದನ್ನು ತಪ್ಪಿಸಲು ಸರ್ಕಾರವು ರೈತರಿಗೆ ಬದಲಿ ವ್ಯವಸಾಯ ನೀತಿಯನ್ನು ರೂಪಿಸಿರುವುದಿಲ್ಲ.<br><br>ಸಮಸ್ಯಾತ್ಮಕ ಮಣ್ಣಿನ ಸುಧಾರಣೆ/ನಿರ್ವಹಣೆ ಬಗ್ಗೆ ರೈತರಿಗೆ ತರಬೇತಿ ಮತ್ತು ಅಭಿಯಾನ ಕಾರ್ಯಕ್ರಮಗಳಲ್ಲಿ ಅರಿವು ಮೂಡಿಸಲಾಗುತ್ತಿದೆ ಹಾಗೂ ಇವುಗಳ ನಿರ್ವಹಣೆಗೆ ಕೇಂದ್ರ ಪುರಸ್ಕೃತ ಯೋಜನೆಗಳಾದ "ಆಹಾರ ಮತ್ತು ಪೌಷ್ಠಿಕ ಭದ್ರತೆ (FNS)" ಮತ್ತು "ರಾಷ್ಟ್ರೀಯ ಖಾದ್ಯತೈಲ ಅಭಿಯಾನ (NMEO)"ದಡಿ ಶೇ.50ರ ರಿಯಾಯಿತಿ ದರದಲ್ಲಿ ಜಿಪ್ಸಂ, ಕೃಷಿ ಸುಣ್ಣ, ಡೋಲೋಮೈಟ್, ಲಘು ಪೋಷಕಾಂಶಗಳು, ಎರೆಹುಳು ಗೊಬ್ಬರ, ಸಾವಯವ ಗೊಬ್ಬರ (ಆರ್ಗಾನಿಕ್ ಮೆನ್ಯೂರ್), ರಂಜಕಯುಕ್ತ ಸಾವಯವ ಗೊಬ್ಬರ (PROM), ಖಾದ್ಯವಲ್ಲದ ಎಣ್ಣೆ ರಹಿತ ಹಿಂಡಿ ಗೊಬ್ಬರ, ಸಿಟಿ ಕಾಂಪೋಸ್ಟ್ (BULK SUPPLY) ಮತ್ತು ಜೈವಿಕ ಗೊಬ್ಬರಗಳನ್ನು ಹಾಗೂ "ಸಾವಯವ ಇಂಗಾಲ ಅಭಿಯಾನ" ಯೋಜನೆಯಡಿ ಹಸಿರೆಲೆ ಗೊಬ್ಬರ ಬೀಜಗಳನ್ನು ಶೇ.75ರ ರಿಯಾಯಿತಿ ದರದಲ್ಲಿ ಎಲ್ಲಾ ವರ್ಗದ ರೈತರಿಗೆ ರೈತ ಸಂಪರ್ಕ ಕೇಂದ್ರಗಳ ಮೂಲಕ ವಿತರಿಸಲಾಗುತ್ತಿದೆ.<br><br>ವಿಜಯಪುರ ಜಿಲ್ಲೆಯಲ್ಲಿ ಸವಳು ಭೂಮಿಯನ್ನು ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಭೂಗತ |

| | | |
|---|---|---|
| | | ಬಸಿಗಾಲುವೆ ( Subsurface drainage) ಮೂಲಕ ಉಪಚರಿಸುವ ಕ್ರಮ ಕೈಗೊಳ್ಳಲಾಗುತ್ತಿದ್ದು, ಸವಳು ಜಮೀನನ್ನು ಉಪಚರಿಸಿ ರೈತರಿಗೆ ಬೆಳೆ ಬೆಳೆಯಲು ಅನುಕೂಲ ಮಾಡಿಕೊಡಲಾಗುತ್ತದೆ. |
| ಇ) | ಶಾಶ್ವತವಾಗಿ ರಾಸಾಯನಿಕ ಗೊಬ್ಬರ ಬಳಸುವುದನ್ನು ನಿಷೇಧಿಸಿ ಸಾವಯವ ಕೃಷಿಯಿಂದ ವ್ಯವಸಾಯ ಮಾಡಲು ರೈತರಿಗೆ ಸಲಹೆ ನೀಡಲು ಸರ್ಕಾರ ಏನಾದರು ಕ್ರಮ ಕೈಗೊಳ್ಳುವುದೇ? | ಆಹಾರ ಭದ್ರತೆ, ಉತ್ಪಾದನೆ, ಉತ್ಪಾದಕತೆ ಮತ್ತು ಲಾಭದಾಯಕತೆ ದೃಷ್ಠಿಯಿಂದ ಶಾಶ್ವತವಾಗಿ ರಾಸಾಯನಿಕ ಗೊಬ್ಬರ ಬಳಸುವುದನ್ನು ನಿಷೇಧಿಸಿ ಸಾವಯವ ಕೃಷಿಯಲ್ಲಿ ತೊಡಗಿಸಿಕೊಳ್ಳಲು ರೈತರಿಗೆ ಸಲಹೆ ನೀಡಲು ಕಷ್ಟಸಾಧ್ಯವಾಗಿರುತ್ತದೆ. ಆದರೆ, ಸಾವಯವ ಕೃಷಿ ಅಳವಡಿಸಿಕೊಳ್ಳಲು ಸರ್ಕಾರದಿಂದ ರೈತರಿಗೆ ಅರಿವು ಮೂಡಿಸಲು ಈ ಕೆಳಕಂಡ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.<br><br>• ಇಲಾಖೆಯ ಜಿಲ್ಲಾ ಕೃಷಿ ತರಬೇತಿ ಕೇಂದ್ರಗಳ ಮೂಲಕ **ಸಾವಯವ ಕೃಷಿ ಅವಶ್ಯಕತೆ ಮತ್ತು ಮಹತ್ವ** ಕುರಿತು ರೈತರಿಗೆ ಆನ್‌ಲೈನ್ ಹಾಗೂ ಸಾಂಸ್ಥಿಕ ತರಬೇತಿ ಕಾರ್ಯಕ್ರಮಗಳನ್ನು ಏರ್ಪಡಿಸಲಾಗುತ್ತಿದೆ. ಮುಂದುವರೆದು, ಪ್ರಗತಿಪರ ಸಾವಯವ ಕೃಷಿಕರ ಮತ್ತು ಮಾದರಿ ಸಾವಯವ ಕ್ಷೇತ್ರಗಳ ಭೇಟಿ ಮಾಡಿಸಿ ಅನುಭವ ಹಂಚಿಕೆ ಮಾಡಿಸುವುದರ ಮೂಲಕ ರೈತರಿಗೆ ಅರಿವು ಮೂಡಿಸಲಾಗುತ್ತಿದೆ.<br><br>• ಇಲಾಖೆಯ ವಿವಿಧ ಕಾರ್ಯಕ್ರಮಗಳು, ಆಕಾಶವಾಣಿ, ದೂರದರ್ಶನ, ಜಿಲ್ಲಾ/ರಾಜ್ಯ ಮಟ್ಟದ ಸಾವಯವ ಮತ್ತು ಸಿರಿಧಾನ್ಯ ಕಾರ್ಯಾಗಾರ/ರಾಷ್ಟ್ರೀಯ & ಅಂತರರಾಷ್ಟ್ರೀಯ ಮೇಳಗಳು/ವಸ್ತು ಪ್ರದರ್ಶನಗಳ ಮೂಲಕ ರಾಜ್ಯದ ಸಾವಯವ ಮತ್ತು ಸಿರಿಧಾನ್ಯ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಸಂಪರ್ಕ ಒದಗಿಸಿಕೊಡುವ ನಿಟ್ಟಿನಲ್ಲಿ ಹಾಗು ರೈತರು, ಗ್ರಾಹಕರು ಮತ್ತು ಇತರೆ ಪಾಲುದಾರರಲ್ಲಿ ಅರಿವು ಮೂಡಿಸಲಾಗುತ್ತಿದೆ.<br><br>• ಸಾವಯವ ಇಂಗಾಲ ಅಭಿಯಾನ ಕಾರ್ಯಕ್ರಮದಡಿ ಆಯ್ದ ರೈತರಿಗೆ ಪ್ರತಿ ಹೆಕ್ಟೇರ್‌ಗೆ ಗರಿಷ್ಠ ರೂ.2500/-ಗಳ ಮೌಲ್ಯದ ಹಸಿರೆಲೆ ಗೊಬ್ಬರ ಬೀಜಗಳನ್ನು ನೀಡುವುದರ ಮೂಲಕ ಮಣ್ಣಿನಲ್ಲಿ ಸಾವಯವ ಇಂಗಾಲ ಹೆಚ್ಚಿಸುವ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸಲಾಗುತ್ತಿದೆ. |

ಸಂಖ್ಯೆ: AGRI/144/ACT/2024

**(ಎನ್. ಚಲುವರಾಯಸ್ವಾಮಿ)**

ಕೃಷಿ ಸಚಿವರು